ಸಂಖ್ಯೆ: ಆಇ144 ವೆಚ್ಚ-12/15

ಕರ್ನಾಟಕ ಸರ್ಕಾರದ ಸಚಿವಾಲಯ
ವಿಧಾನ ಸೌಧ,
ಬೆಂಗಳೂರು, ದಿನಾಂಕ:30.03.2015.

## ಅಧಿಸೂಚನೆ

ಸರ್ಕಾರದ ಇಲಾಖೆಗಳು ಮತ್ತು ಇತರೆ ಸಂಗ್ರಹಣಾ ಸಂಸ್ಥೆಗಳು ಈ ಕೆಳಕಂಡ ಕಾಮಗಾರಿಗಳನ್ನು ನೇರವಾಗಿ ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್ (ಕೆಆರ್‌ಐಡಿಎಲ್ -ಹಿಂದಿನ ಕೆಎಲ್‌ಎಸಿ) ಸಂಸ್ಥೆಯ ಮೂಲಕ ಗರಿಷ್ಟ ರೂ.2.00 ಕೋಟಿಗಳ ಮಿತಿಯಲ್ಲಿ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ) ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ದಿನಾಂಕ:01.04.2015 ರಿಂದ ಒಂದು ವರ್ಷದ ಅವಧಿಗೆ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ನೀಡಿದೆ.

1. ಎಲ್ಲಾ ತರಹದ ಕಟ್ಟಡಗಳ ನಿರ್ಮಾಣ ಹಾಗೂ ನಿರ್ವಹಣೆ, ಲೇಔಟ್ ನಿರ್ಮಾಣ, ಸಂಬಂಧಿಸಿದ ಎಲ್ಲಾ ಎಲೆಕ್ಟ್ರಿಕಲ್ ಕಾಮಗಾರಿಗಳ ನಿರ್ಮಾಣ, ರಸ್ತೆ ದೀಪಗಳ ನಿರ್ವಹಣೆ.
2. ಮೂಲಭೂತ ಸೌಕರ್ಯದ ಕಾಮಗಾರಿಗಳು ಮತ್ತು ರಸ್ತೆ ನಿರ್ಮಾಣ ಹಾಗೂ ನಿರ್ವಹಣೆ.
3. ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಕಾಮಗಾರಿಗಳು.

ಕೆ.ಆರ್.ಐ.ಡಿ.ಎಲ್ ಸಂಸ್ಥೆಯು ಮೇಲಿನ ಕಾಮಗಾರಿಗಳನ್ನು ತನ್ನದೇ ಆಂತರಿಕ ಸಂಪನ್ಮೂಲಗಳಿಂದ ಕಾರ್ಯಗತಗೊಳಿಸತಕ್ಕದ್ದು. ಬೇರೆಯವರ ಮುಖಾಂತರ ಕೈಗೊಳ್ಳುವುದಾದಲ್ಲಿ, ಕೆ.ಟಿ.ಪಿ.ಪಿ ಕಾಯ್ದೆ ಮತ್ತು ಅಧಿನಿಯಮಗಳು, ಇ-ಸಂಗ್ರಹಣಾ ವೇದಿಕೆಯ ಮೂಲಕ ಕೈಗೊಳ್ಳಬೇಕೆಂಬ ನಿಬಂಧನೆಗಳನ್ನು ವಿಧಿಸಲಾಗಿದೆ. ಉತ್ತಮ ಗುಣಮಟ್ಟದ ಸೇವೆಯನ್ನು ಸಮಂಜಸ ದರದಲ್ಲಿ ಸಂಗ್ರಹಿಸುವುದನ್ನು ಸಂಬಂಧಪಟ್ಟ ಇಲಾಖೆಗಳು ಧೃಡಪಡಿಸಿಕೊಳ್ಳುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ.ನಂದಕುಮಾರ್)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿ
ಆರ್ಥಿಕ ಇಲಾಖೆ
(ಲೋಕೋಪಯೋಗಿ ಆರ್ಥಿಕ ಕೋಶ)

ಇವರಿಗೆ:

ಜಂಟಿ ನಿರ್ದೇಶಕರು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಆರ್.ವಿ.ಕಾಲೇಜು ಅಂಚೆ, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-59, ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ ಹಾಗೂ 25 ಮುದ್ರಿತ ಪ್ರತಿಗಳನ್ನು ಸರಬರಾಜು ಮಾಡಲು ಕೋರಿದೆ.

ಪ್ರತಿ:

1) ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3) ನಿರ್ದೇಶಕರು, ರಾಜ್ಯಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು - 10 ಪ್ರತಿಗಳು.
4) ಹೆಚ್ಚುವರಿ ಪ್ರತಿ.